Akashvani: Bangalore
National Bulletin In Kannada
23.04.2026: 13.10hrs

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

23.04.2026: 13.10hrs

********

**ಮುಖ್ಯಾಂಶಗಳು :**

೧. ತಮಿಳುನಾಡಿನ ೨೩೪, ಪಶ್ಚಿಮ ಬಂಗಾಳದ ೨೯೪ ವಿಧಾನಸಭಾ ಕ್ಷೇತ್ರಗಳಿಗೆ ಮತದಾನ ಪ್ರಗತಿಯಲ್ಲಿ

೨. ಹನ್ನೊಂದನೇ ಭಾರತ-ಈಜಿಪ್ಟ್ ಜಂಟಿ ರಕ್ಷಣಾ ಸಮಿತಿ ಸಭೆ ಕೈರೋದಲ್ಲಿ ಸಂಪನ್ನ

೩. ಉತ್ತರಪ್ರದೇಶ ಮಿರ್ಜಾಪುರದಲ್ಲಿ ಸರಣಿ ಅಪಘಾತ ; ನಾಲ್ವರು ಮಕ್ಕಳು ಸೇರಿ ೧೧ ಮಂದಿ ಸಾವು

೪. ಐಪಿಎಲ್ ಟಿ-೨೦ ಕ್ರಿಕೆಟ್ : ಇಂದಿನ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್-ಚೆನ್ನೈ ಸೂಪರ್ ಕಿಂಗ್ಸ್ ಮುಖಾಮುಖಿ

***********

ತಮಿಳುನಾಡು ವಿಧಾನಸಭಾ ಚುನಾವಣೆ ಹಾಗೂ ಪಶ್ಚಿಮ ಬಂಗಾಳದಲ್ಲಿ ಮೊದಲ ಹಂತದ ಚುನಾವಣೆಯ ಮತದಾನ ಪ್ರಕ್ರಿಯೆ ಪ್ರಗತಿಯಲ್ಲಿದೆ. ಚುನಾವಣಾ ಆಯೋಗದ ಮಾಹಿತಿಯಂತೆ ಬೆಳಗ್ಗೆ ೧೧ ಗಂಟೆಯವರೆಗೆ ತಮಿಳುನಾಡಿನಲ್ಲಿ ಶೇಕಡ ೩೭.೫೬ ರಷ್ಟು ಹಾಗೂ ಪಶ್ಚಿಮ ಬಂಗಾಳದಲ್ಲಿ ಶೇಕಡ ೪೧.೧೧ ರಷ್ಟು ಮತದಾನವಾಗಿದೆ. ತಮಿಳುನಾಡಿನ ೨೩೪ ಕ್ಷೇತ್ರಗಳಿಗೆ ಒಂದೇ ಹಂತದಲ್ಲಿ ಮತದಾನ ನಡೆಯುತ್ತಿದ್ದು, ಒಟ್ಟಾರೆ ೫ ಕೋಟಿ ೭೩ ಲಕ್ಷ ೪೩ ಸಾವಿರ ಮತದಾರರು ತಮ್ಮ ಸಾಂವಿಧಾನಿಕ ಹಕ್ಕು ಚಲಾಯಿಸುತ್ತಿದ್ದಾರೆ. ಪಶ್ಚಿಮ ಬಂಗಾಳದ ೨೯೪ ವಿಧಾಸಭಾ ಕ್ಷೇತ್ರಗಳ ಪೈಕಿ ಮೊದಲ ಹಂತದಲ್ಲಿ ಇಂದು ೧೬ ಜಿಲ್ಲೆಗಳ ೧೫೨ ಕ್ಷೇತ್ರಗಳಿಗೆ ಮತದಾನ ನಡೆಯುತ್ತಿದ್ದು, ಇನ್ನುಳಿದ ಕ್ಷೇತ್ರಗಳಿಗೆ ಇದೇ ೨೯ರಂದು ಎರಡನೇ ಹಂತದ

ಮತದಾನ ನಡೆಯಲಿದೆ. ಮೇ ೪ರಂದು ವಿಧಾನಸಭಾ ಚುನಾವಣೆಯ ಫಲಿತಾಂಶ ಪ್ರಕಟವಾಗಲಿದೆ.

***********

ಶಿಕ್ಷಣ ಕೇವಲ ಜ್ಞಾನ ಪಡೆಯುವ ಮಾಧ್ಯಮವಲ್ಲ. ಬದಲಿಗೆ ಇದು ಸಮಗ್ರ ವ್ಯಕ್ತಿತ್ವ ವಿಕಸನ ಮತ್ತು ಜೀವನದ ಮೌಲ್ಯಗಳನ್ನು ಅಳವಡಿಸಿಕೊಳ್ಳುವ ನಿರಂತರ ಪ್ರತಿಕ್ರಿಯೆಯಾಗಿದೆ ಎಂದು ಲೋಕಸಭಾ ಅಧ್ಯಕ್ಷ ಓಂಬಿರ್ಲಾ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ ದೆಹಲಿ ಪಬ್ಲಿಕ್ ಶಾಲೆಯ ವಾರ್ಷಿಕೋತ್ಸವದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಇಂದಿನ ಬದಲಾಗುತ್ತಿರುವ ಯುಗದಲ್ಲಿ ಯುವಜನರು ನಾವೀನ್ಯತೆ, ಮೂಲಚಿಂತನೆ ಮತ್ತು ತಂತ್ರಜ್ಞಾನದೊಂದಿಗೆ ಮುನ್ನಡೆಯುವುದು ಅನಿವಾರ್ಯವಾಗಿದೆ ಎಂದರು. ರಾಷ್ಟ್ರೀಯ ಶಿಕ್ಷಣ ನೀತಿ ೨೦೨೦ರ ಮೂಲಕ ದೇಶದ ಶಿಕ್ಷಣ ವ್ಯವಸ್ಥೆಯು ಹೊಸ ದಿಕ್ಕನ್ನು ಪಡೆಯುತ್ತಿದೆ. ಇದು ವಿದ್ಯಾರ್ಥಿಗಳನ್ನು ಕುತೂಹಲ, ತಮ್ಮ ಪ್ರತಿಭೆ ಮತ್ತು ಕೌಶಲ್ಯಗಳನ್ನು ಬೆಳೆಸುತ್ತದೆ ಎಂದು ಹೇಳಿದ ಅವರು, ವಿಕಸಿತ ಭಾರತ-೨೦೪೭ರ ಸಂಕಲ್ಪವನ್ನು ಸಾಕಾರಗೊಳಿಸುವಲ್ಲಿ ವಿದ್ಯಾರ್ಥಿಗಳು ಸಕ್ರಿಯ ಪಾತ್ರ ವಹಿಸುವಂತೆ ಅವರು ಸಲಹೆ ನೀಡಿದರು.

***********

೧೧ನೇ ಭಾರತ-ಈಜಿಪ್ಟ್ ಜಂಟಿ ರಕ್ಷಣಾ ಸಮಿತಿ ಸಭೆಯು ಕೈರೋದಲ್ಲಿ ಸಂಪನ್ನವಾಗಿದೆ. ಇದು ದ್ವಿಪಕ್ಷೀಯ ರಕ್ಷಣಾ ಸಹಕಾರವನ್ನು ಆಳಗೊಳಿಸುವಲ್ಲಿ ಮತ್ತೊಂದು ಪ್ರಮುಖ ಹೆಜ್ಜೆಯಾಗಿದೆ. ಚರ್ಚೆಯ ಸಂದರ್ಭದಲ್ಲಿ, ಎರಡೂ ರಾಷ್ಟ್ರಗಳು ತಮ್ಮ ಕಾರ್ಯತಂತ್ರದ ಪಾಲುದಾರಿಕೆಯ ಪ್ರಮುಖ ಆಧಾರಸ್ತಂಭವಾದ ರಕ್ಷಣಾ ಸಂಬಂಧಗಳನ್ನು ಮತ್ತಷ್ಟು ಬಲಪಡಿಸುವ ತಮ್ಮ ಬದ್ಧತೆಯನ್ನು ಪುನರುಚ್ಚರಿಸಿದವು. ಎರಡೂ ದೇಶಗಳ ನೌಕಾ ಪಡೆಯ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು. ಇದು ಎರಡೂ ಕಡೆಗಳ ನಡುವೆ ಬೆಳೆಯುತ್ತಿರುವ ಕಡಲ ಸಹಯೋಗವನ್ನು ಎತ್ತಿ ತೋರಿಸುತ್ತದೆ. ಭೇಟಿಯ ಭಾಗವಾಗಿ, ಭಾರತೀಯ ನಿಯೋಗ, ಹೆಲಿಯೊಪೊಲಿಸ್ ಯುದ್ಧ ಸ್ಮಾರಕಕ್ಕೆ ಭೇಟಿ ನೀಡಿ, ಗೌರವ ನಮನ ಸಲ್ಲಿಸಿತು. ವಿಶ್ವ ಯುದ್ಧಗಳ ಸಮಯದಲ್ಲಿ ತ್ಯಾಗ ಮಾಡಿದ ಭಾರತೀಯ ಸೈನಿಕರನ್ನು ಗೌರವಿಸಲಾಯಿತು.ಇದೇ ವೇಳೆ ನಿಯೋಗವು ಈಜಿಪ್ಟ್

ವಾಯುಪಡೆಯ ಕಮಾಂಡರ್ ಲೆಫ್ಟಿನೆಂಟ್ ಜನರಲ್ ಅಮ್ರ್ ಅಬ್ದೆಲ್ ರೆಹಮಾನ್ ಸಕ್ರ್ ಅವರನ್ನು ಭೇಟಿ ಮಾಡಿತು.

***********

೪ನೇ ಭಾರತ-ಆಫ್ರಿಕಾ ಶೃಂಗಸಭೆ-೨೦೨೬, ಇದೇ ಮೇ ೨೮ರಂದು ನವದೆಹಲಿಯಲ್ಲಿ ನಡೆಯಲಿದೆ. ಶೃಂಗಸಭೆಯ ಪೂರ್ವಭಾವಿಯಾಗಿ ನವದೆಹಲಿಯಲ್ಲಿ ಇಂದು ನಡೆದ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್, ಜಗತ್ತು ಸಂಕೀರ್ಣ, ಭೌಗೋಳಿಕ, ರಾಜಕೀಯ ಸವಾಲುಗಳನ್ನು ಎದುರಿಸುತ್ತಿರುವ ಈ ಸಮಯದಲ್ಲಿ ಭಾರತ-ಆಫ್ರಿಕಾ ಸಹಭಾಗಿತ್ವವು ಹೆಚ್ಚಿನ ಪ್ರಾಮುಖ್ಯತೆ ಪಡೆದಿದೆ ಎಂದು ಹೇಳಿದರು. ಇಂದು ಆಫ್ರಿಕಾ, ಭಾರತದ ವಿದೇಶಾಂಗ ನೀತಿಯಲ್ಲಿ ಕೇಂದ್ರ ಸ್ಥಾನವನ್ನು ಪಡೆದಿದೆ. ಭಾರತದ ನೇತೃತ್ವದ ಜಾಗತಿಕ ಉಪಕ್ರಮಗಳಲ್ಲಿ ಆಫ್ರಿಕಾದ ರಾಷ್ಟ್ರಗಳು ಪ್ರಮುಖ ಪಾಲುದಾರ ದೇಶಗಳಾಗಿವೆ ಎಂದು ಡಾ.ಎಸ್.ಜೈಶಂಕರ್ ತಿಳಿಸಿದರು. ಇದೇ ವೇಳೆ ಅವರು, ಮೇ ೨೮ರಿಂದ ೩೧ರವರೆಗೆ ನಡೆಯಲಿರುವ ಭಾರತ-ಆಫ್ರಿಕಾ ಶೃಂಗಸಭೆಯ ಲಾಂಛನ, ಧ್ಯೇಯವಾಕ್ಯ ಮತ್ತು ವೆಬ್‌ಸೈಟ್ ಅನ್ನು ಅನಾವರಣಗೊಳಿಸಿದರು.

***********

ವಿದೇಶಾಂಗ ಸಚಿವಾಲಯದ ಕಾರ್ಯದರ್ಶಿ ಸಿ.ಬಿ.ಜಾರ್ಜ್ ಅವರು ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರೆಸ್ ಅವರನ್ನು ನ್ಯೂಯಾರ್ಕ್‌ನಲ್ಲಿಂದು ಭೇಟಿಯಾಗಿ ಮಾತುಕತೆ ನಡೆಸಿದರು. ಸಭೆಯಲ್ಲಿ, ಬಹುಪಕ್ಷೀಯತೆಗೆ ಭಾರತದ ಬಲವಾದ ಬದ್ಧತೆಯನ್ನು ಸಿ.ಬಿ.ಜಾರ್ಜ್ ಒತ್ತಿ ಹೇಳಿದ್ದಾರೆ. ವಿಶ್ವಸಂಸ್ಥೆಯ ಸುಧಾರಣೆಗಳು ಸೇರಿದಂತೆ ಅವರು ತಮ್ಮ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

***********

ಉತ್ತರಪ್ರದೇಶದ ಮಿರ್ಜಾಪುರದ ಡ್ರಮಂಡ್‌ಗಂಜ್ ಪ್ರದೇಶದಲ್ಲಿ ನಿನ್ನೆ ರಾತ್ರಿ ಸಂಭವಿಸಿದ ಭೀಕರ ಸರಣಿ ಅಪಘಾತದಲ್ಲಿ ನಾಲ್ವರು ಮಕ್ಕಳು ಸೇರಿದಂತೆ ೧೧ ಜನರು ಸಾವನ್ನಪ್ಪಿದ್ದಾರೆ. ಕಡಿದಾದ ಬೆಟ್ಟದ ರಸ್ತೆಯಲ್ಲಿ ಟ್ರಕ್, ಕಾರು, ಟ್ರಾಕ್ಟರ್, ಎಸ್‌ಯುವಿ ಕಾರಿನ ನಡುವೆ ಈ ಅಪಘಾತ

ಸಂಭವಿಸಿದೆ. ಈ ಕುರಿತು ಮಾಹಿತಿ ನೀಡಿದ ಮಿರ್ಜಾಪುರ ಪೊಲೀಸ್ ವರಿಷ್ಠಾಧಿಕಾರಿ ಅಪರ್ಣ ರಜತ್ ಕೌಶಿಕ್ ಮಾತನಾಡಿ, ಅಪಘಾತದ ನಂತರ ಎಸ್‌ಯುವಿ ಕಾರಿಗೆ ಬೆಂಕಿ ಹೊತ್ತಿಕೊಂಡ ಪರಿಣಾಮ ಅದರಲ್ಲಿದ್ದ ಏಳು ಜನರು ಸಜೀವ ದಹನವಾಗಿದ್ದಾರೆ. ಅಲ್ಲದೇ ಮತ್ತೊಂದು ಕಾರಿನಲ್ಲಿದ್ದ ಇಬ್ಬರು ಹಾಗೂ ಟ್ರಕ್ ಚಾಲಕ ಮೃತಪಟ್ಟಿದ್ದಾರೆ ಎಂದು ತಿಳಿಸಿದ್ದಾರೆ. ಪ್ರಾಥಮಿಕ ಮಾಹಿತಿಯ ಪ್ರಕಾರ, ಬೆಟ್ಟದಿಂದ ಕೆಳಗೆ ಇಳಿಯುತ್ತಿದ್ದ ಟ್ರಕ್‌ನಲ್ಲಿಬ್ರೇಕ್ ವೈಫಲ್ಯದಿಂದಾಗಿ ಸರಣಿ ಅಪಘಾತ ಸಂಭವಿಸಿದೆ. ಅಪಘಾತದಲ್ಲಿ ಎರಡೂ ಕಾರುಗಳು ಸಂಪೂರ್ಣವಾಗಿ ಜಖಂಗೊಂಡಿದೆ. ಅಪಘಾತದಲ್ಲಿ ಮೃತಪಟ್ಟವರ ಕುಟುಂಬಗಳಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಪ್ರಧಾನಿ ನರೇಂದ್ರ ಮೋದಿ ಸಂತಾಪ ಸೂಚಿಸಿದ್ದಾರೆ. ಪ್ರಧಾನಮಂತ್ರಿಗಳ ರಾಷ್ಟ್ರೀಯ ಪರಿಹಾರ ನಿಧಿಯಿಂದ ಅಪಘಾತದಲ್ಲಿ ಮೃತಪಟ್ಟವರ ಕುಟುಂಬದವರಿಗೆ ತಲಾ ೨ ಲಕ್ಷ ರೂಪಾಯಿ ಮತ್ತು ಹಾಗೂ ಗಾಯಗೊಂಡವರಿಗೆ ೫೦ ಸಾವಿರ ರೂಪಾಯಿ ಪರಿಹಾರವನ್ನು ಪ್ರಧಾನಿ ಘೋಷಿಸಿದ್ದಾರೆ.

***********

ಸಿಬಿಎಸ್‌ಇ ೧೦ನೇ ತರಗತಿಯ ಪರೀಕ್ಷೆ-೨ ಮೇ ೧೫ರಿಂದ ನಡೆಯಲಿದೆ. ತಮ್ಮ ಅಂಕಗಳನ್ನು ಸುಧಾರಿಸಿಕೊಳ್ಳಲು ಬಯಸುವ ವಿದ್ಯಾರ್ಥಿಗಳಿಗೆ ಈ ಪರೀಕ್ಷೆಯು ಐಚ್ಛಿಕವಾಗಿರುತ್ತದೆ ಎಂದು ಕೇಂದ್ರೀಯ ಪ್ರೌಢಶಿಕ್ಷಣ ಮಂಡಳಿ ತಿಳಿಸಿದೆ. ಎಲ್ಲಾ ಉತ್ತೀರ್ಣರಾದ ವಿದ್ಯಾರ್ಥಿಗಳು ವಿಜ್ಞಾನ, ಗಣಿತ, ಸಮಾಜ ವಿಜ್ಞಾನ ಮತ್ತು ಭಾಷೆಗಳಲ್ಲಿ ಯಾವುದಾದರೂ ಮೂರು ವಿಷಯಗಳಲ್ಲಿ ತಮ್ಮ ಕಾರ್ಯಕ್ಷಮತೆಯನ್ನು ಹೆಚ್ಚಿಸಿಕೊಳ್ಳಲು ಅವಕಾಶ ನೀಡಲಾಗುತ್ತದೆ. ಮಂಡಳಿಯು ಈ ತಿಂಗಳ ೧೫ ರಂದು ಪರೀಕ್ಷೆ-೧ರ ಫಲಿತಾಂಶಗಳನ್ನು ಪ್ರಕಟಿಸಿತ್ತು. ಈ ಉಪಕ್ರಮವು ರಾಷ್ಟ್ರೀಯ ಶಿಕ್ಷಣ ನೀತಿ ೨೦೨೦ ರೊಂದಿಗೆ ಹೊಂದಿಕೆಯಾಗುತ್ತದೆ. ಇದು ವಿದ್ಯಾರ್ಥಿಗಳಿಗೆ ಅದೇ ಶೈಕ್ಷಣಿಕ ವರ್ಷದೊಳಗೆ ಎರಡನೇ ಅವಕಾಶವನ್ನು ಒದಗಿಸುವ ಮೂಲಕ ಪರೀಕ್ಷೆಗೆ ಸಂಬಂಧಿಸಿದ ಒತ್ತಡವನ್ನು ನಿವಾರಿಸಲು ಸಹಕಾರಿಯಾಗುತ್ತದೆ ಎಂದು ಕೇಂದ್ರೀಯ ಪ್ರೌಢಶಿಕ್ಷಣ ಮಂಡಳಿ ತಿಳಿಸಿದೆ.

***********

ಕಳೆದ ೧೨ ವರ್ಷಗಳಲ್ಲಿ ಭಾರತದ ಕಡಲ ವಲಯ ಅಪ್ರತಿಮ ಬೆಳವಣಿಗೆ ಸಾಧಿಸಿದೆ ಎಂದು ಕೇಂದ್ರ ಬಂದರು, ಹಡಗು ಮತ್ತು ಜಲಮಾರ್ಗಗಳ ಸಚಿವ ಸರ್ಬಾನಂದ ಸೋನುವಾಲ್ ಹೇಳಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಅವರು, 'ಸಾಗರಮಾಲಾ ಯೋಜನೆ'ಯ ಮೂಲಕ ಭಾರತ ಐತಿಹಾಸಿಕ ಮೈಲಿಗಲ್ಲು ಸಾಧಿಸಿದೆ. ಕಳೆದ ಹಣಕಾಸು ವರ್ಷದಲ್ಲಿ ಒಳನಾಡಿನ ಜಲಮಾರ್ಗದ ಸರಕು ಸಾಗಾಣೆಯಲ್ಲಿ ಏಳು ಪಟ್ಟು ಹೆಚ್ಚಳವಾಗಿದೆ ಮತ್ತು ದಾಖಲೆಯ ೬೧೫ ಮೆಟ್ರಿಕ್ ಟನ್ ಸರಕು ನಿರ್ವಹಣೆ ಮಾಡಲಾಗಿದೆ ಎಂದು ತಿಳಿಸಿದರು.

***********

ಉತ್ತರಾಖಂಡದ ಚಮೋಲಿ ಜಿಲ್ಲೆಯಲ್ಲಿರುವ ಬದರಿನಾಥ ದೇವಾಲಯದ ಬಾಗಿಲುಗಳನ್ನು ಇಂದು ಬೆಳಗ್ಗೆ ವೇದ ಮಂತ್ರಗಳು ಮತ್ತು ಸಾಂಪ್ರದಾಯಿಕ ಆಚರಣೆಗಳ ನಡುವೆ ಭಕ್ತರಿಗಾಗಿ ತೆರೆಯಲಾಯಿತು. ಉತ್ತರಾಖಂಡ ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಅವರು, ಮಹಾಭಿಷೇಕ ಪೂಜೆ ನೆರವೇರಿಸಿದರು. ರಾಷ್ಟ್ರ ಮತ್ತು ರಾಜ್ಯದ ಸಮೃದ್ಧಿ ಮತ್ತು ಯೋಗಕ್ಷೇಮಕ್ಕಾಗಿ ಪ್ರಾರ್ಥಿಸಿದರು. ಯಾತ್ರಾರ್ಥಿಗಳಿಗೆ ಸುರಕ್ಷಿತ ತೀರ್ಥಯಾತ್ರೆಯನ್ನು ಖಚಿತಪಡಿಸಿಕೊಳ್ಳಲು ಜಿಲ್ಲಾಡಳಿತ ಸಕಲ ವ್ಯವಸ್ಥೆಗಳನ್ನು ಮಾಡಿದೆ. ಗಂಗೋತ್ರಿ ಮತ್ತು ಯಮುನೋತ್ರಿ ದೇವಾಲಯಗಳಿಗೆ ತೀರ್ಥಯಾತ್ರೆಗಳು ಸರಾಗವಾಗಿ ನಡೆಯುತ್ತಿದ್ದರೆ, ಕೇದಾರನಾಥ ದೇವಾಲಯದ ಬಾಗಿಲುಗಳನ್ನು ಭಕ್ತರಿಗಾಗಿ ನಿನ್ನೆ ತೆರೆಯಲಾಯಿತು.

***********

ಮೇ ೧ರಿಂದ ಜಾರಿಗೆ ಬರಲಿರುವ 'ಆನ್‌ಲೈನ್ ಗೇಮಿಂಗ್ ಉತ್ತೇಜನ ಮತ್ತು ನಿಯಂತ್ರಣ ನಿಯಮಗಳು ೨೦೨೬' ಅನ್ನು ಸರ್ಕಾರ ಅಧಿಸೂಚಿಸಿದೆ. ಆನ್‌ಲೈನ್ ಆಟವು ಹಣದ ಆಟವೇ ಅಥವಾ ಅನುಮತಿಸಲಾದ ಸಾಮಾಜಿಕ ಆಟವೇ ಅಥವಾ ಇ-ಸ್ಪೋರ್ಟ್ಸ್ ಆಗಿದೆಯೇ ಎಂಬುದನ್ನು ನಿರ್ಧರಿಸಲು ಸ್ಪಷ್ಟ, ಪಾರದರ್ಶಕ ಮತ್ತು ಸಮಯಬದ್ಧ ಕಾರ್ಯವಿಧಾನವನ್ನು ಒದಗಿಸುವುದು ಈ ನಿಯಮಗಳ ಉದ್ದೇಶವಾಗಿದೆ. ಈ ನಿಯಮಗಳ ಕುರಿತು ಮಾಹಿತಿ ನೀಡಿದ ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯದ ಕಾರ್ಯದರ್ಶಿ ಎಸ್.ಕೃಷ್ಣನ್, ಆಟಗಳನ್ನು ಆನ್‌ಲೈನ್ ಹಣದ ಆಟಗಳು ಅಥವಾ ಸಾಮಾಜಿಕ ಆಟಗಳೆಂದು ವರ್ಗೀಕರಿಸಲು ಇದು ಒಂದು

ಐಚ್ಛಿಕ ನಿರ್ಧಾರ ಪ್ರಕ್ರಿಯೆಯನ್ನು ಪರಿಚಯಿಸುತ್ತದೆ. ಇದನ್ನು ನಿಯಂತ್ರಕ ಪ್ರಾಧಿಕಾರ, ಸೇವಾ ಪೂರೈಕೆದಾರರು ಅಥವಾ ನಿರ್ದಿಷ್ಟ ಸಂದರ್ಭಗಳಲ್ಲಿ ಸರ್ಕಾರ ಪ್ರಾರಂಭಿಸಬಹುದು ಎಂದು ತಿಳಿಸಿದರು.

***********

ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿಂದು ನಡೆಯುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಮತ್ತು ಚೆನ್ನೈ ಸೂಪರ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

*****END******